ಮುಖ್ಯ ರಸ್ತೆಗಳಿಗಾಗಿ ರೂ.141.84 ಲಕ್ಷಗಳ ಅನುದಾನದಲ್ಲಿ 720.63 ಕಿ.ಮೀ. ಉದ್ದದ ರಸ್ತೆಯನ್ನು ನಿರ್ವಹಣೆ ಮಾಡಲಾಗಿದೆ.

2010–11ನೇ ಸಾಲಿನಲ್ಲಿ ರಾಜ್ಯ ಹೆದ್ದಾರಿಗಳಿಗಾಗಿ ರೂ.44.85 ಲಕ್ಷ ಅನುದಾನದಲ್ಲಿ 228.30 ಕಿ.ಮೀ. ಉದ್ಧದ ರಸ್ತೆಯನ್ನು ಹಾಗೂ ಜಿಲ್ಲಾ ಮುಖ್ಯ ರಸ್ತೆಗಳಿಗಾಗಿ ರೂ.121.63 ಲಕ್ಷಗಳ ಅನುದಾನದಲ್ಲಿ 846.40 ಕಿ.ಮೀ. ಉದ್ಧದ ರಸ್ತೆಯನ್ನು ನಿರ್ವಹಣೆ ಮಾಡಲಾಗಿದೆ.

2011–12ನೇ ಸಾಲಿನಲ್ಲಿ ರಾಜ್ಯ ಹೆದ್ದಾರಿಗಳಿಗಾಗಿ ರೂ.16.05 ಲಕ್ಷ ಅನುದಾನದಲ್ಲಿ 76.10 ಕಿ.ಮೀ. ಉದ್ದದ ರಸ್ತೆಯನ್ನು ಹಾಗೂ ಜಿಲ್ಲಾ ಮುಖ್ಯ ರಸ್ತೆಗಳಿಗಾಗಿ ರೂ.85.65 ಲಕ್ಷಗಳ ಅನುದಾನದಲ್ಲಿ 296.70 ಕಿ.ಮೀ. ಉದ್ದದ ರಸ್ತೆಯನ್ನು ನಿರ್ವಹಣೆ ಮಾಡಲಾಗಿದೆ.

ರಾಜ್ಯ ಹೆದ್ದಾರಿ ಅಭಿವೃದ್ಧಿ ಯೋಜನೆಯಡಿ ಅಂದಾಜನ್ನು ರೂ.1008.98 ಲಕ್ಷಗಳ ಪ್ರಸ್ತಾವನೆಯು ಪರಿಶೀಲನೆಯಲ್ಲಿದ್ದು, ಅನುದಾನದ ಲಭ್ಯತೆ ಅನುಸಾರ ಕ್ರಮ ಕೈಗೊಳ್ಳಲಾಗುವುದು.

ಈ) ಜಗಳೂರು ಎನ್.ಹೆಚ್.–13 ವರೆಗಿನ ಎಸ್.ಹೆಚ್.–45 ರಸ್ತೆಯನ್ನು ದ್ವಿಪಥ ರಸ್ತೆಯನ್ನಾಗಿ ನಿರ್ಮಿಸುವ ಕಾಮಗಾರಿಯ ಟೆಂಡರ್ ಪ್ರಕ್ರಿಯೆ ಪ್ರಗತಿಯಲ್ಲಿದೆ.

ಪಟ್ಟಣ ಪಂಚಾಯ್ತಿಯನ್ನು ಪುರಸಭೆಯನ್ನಾಗಿ ಮಾಡುವುದು

1008 (1152) ಶ್ರೀ ರಾಮಚಂದ್ರ ಎಸ್.ವಿ. (ಜಗಳೂರು) : ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 2011ನೇ ಜನಗಣತಿ ಪ್ರಕಾರ ಜಗಳೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಉಚ್ಚಂಗಿ ದುರ್ಗ ಗ್ರಾಮ ಪಂಚಾಯತಿಯನ್ನು ಪಟ್ಟಣ ಪಂಚಾಯತಿಯನ್ನಾಗಿ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ ತೆಗೆದುಕೊಂಡಿರುವ ಕ್ರಮದ ಬಗ್ಗೆ ವಿವರ ನೀಡುವುದು;

ಆ) 2011ನೇ ಜನಗಣತಿ ಪ್ರಕಾರ ಜಗಳೂರು ಪಟ್ಟಣ ಪಂಚಾಯಿತಿಯನ್ನು ಪುರಸಭೆಯನ್ನಾಗಿ ಮಾಡುವ ಪ್ರಸ್ತಾವನೆ ಸರ್ಕಾರ ಮುಂದಿದೆಯೇ; ಇದ್ದಲ್ಲಿ ತೆಗೆದುಕೊಂಡಿರುವ ಕ್ರಮದ ಬಗ್ಗೆ ವಿವರ ನೀಡುವುದು?

ಶ್ರೀ ಬಾಲಚಂದ್ರ ಲ. ಜಾರಕಿಹೊಳಿ (ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು) :

ಅ) 2011ರ ಜನಗಣತಿ ಕಾರ್ಯ ಮುಗಿದಿರುತ್ತದೆ. ಆದರೆ ಕೇಂದ್ರ ಸರ್ಕಾರದ ರಿಜಿಸ್ಟ್ರಾರ್ ಜನರಲ್ ಹಾಗೂ ಜನಗಣತಿ ಆಯುಕ್ತರು ನಗರ ಹಾಗೂ ಗ್ರಾಮೀಣ ಸ್ಥಳೀಯ ಸಂಸ್ಥೆಗಳ ಜನಗಣತಿಯ ಅಂಕಿ-ಅಂಶಗಳನ್ನು ಅಧಿಕೃತವಾಗಿ ಪ್ರಕಟಿಸಿರುವುದಿಲ್ಲ. ಅಧಿಕೃತವಾಗಿ ಪ್ರಕಟಿಸಿದ ನಂತರ ಜಗಳೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಉಚ್ಚಂಗಿ ದುರ್ಗ ಗ್ರಾಮ ಪಂಚಾಯತಿಯನ್ನು ಪಟ್ಟಣ ಪಂಚಾಯತಿಯನ್ನಾಗಿ ರಚಿಸುವ ಬಗ್ಗೆ ಕರ್ನಾಟಕ ಪುರಸಭೆ ಕಾಯ್ದೆ 1964ರ ಕಲಂ 3, 9 ಮತ್ತು 349ರನ್ವಯ ನಿಯಮಾನುಸಾರ ಪರಿಶೀಲಿಸಲಾಗುವುದು.

ಆ) -ಮೇಲಿನಂತೆ-

ರಸ್ತೆ ಕಾಮಗಾರಿಗಳ ಅಭಿವೃದ್ಧಿ

1009 (1057) ಶ್ರೀ ರಮೇಶ ಬಂಡಿಸಿದ್ದೇಗೌಡ ಎ.ಬಿ. (ಶ್ರೀರಂಗಪಟ್ಟಣ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಡ್ಯ ತಾಲ್ಲೂಕಿನ ಬೆಂಗಳೂರಿನಿಂದ ಮೈಸೂರು ರಸ್ತೆ ಮಾರ್ಗ ಟಿ.ಎಂ. ಹೊಸೂರು ಗ್ರಾಮ ಕೊಡಿಯಾಲ ಗ್ರಾಮದವರೆಗೆ ರಸ್ತೆ ಕಾಮಗಾರಿಯ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು (ವಿವರಗಳನ್ನು ಒದಗಿಸುವುದು);

ಆ) ಮಂಡ್ಯ-ಬನ್ನೂರು ರಸ್ತೆಯವರೆಗೆ, ಚನ್ನಮ್ಮನದೊಡ್ಡಿ ರಸ್ತೆ, ಟಿ.ಎಂ ಹೊಸೂರು ರಸ್ತೆಗಳ ಅಭಿವೃದ್ಧಿಗಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು (ವಿವರಗಳನ್ನು ಒದಗಿಸುವುದು);

ಇ) ಬೆಂಗಳೂರು-ಮೈಸೂರು ರಸ್ತೆ, ಮದ್ರಾಸ್-ಕಣ್ಣಾನೂರು ರಸ್ತೆಯ ಮಾರ್ಗ ಪಾಲಹಳ್ಳಿ, ಕೆ.ಆರ್.ಸಾಗರ ರಸ್ತೆಯು ಸಂಪೂರ್ಣವಾಗಿ ಹದಗೆಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಇದರ ಅಭಿವೃದ್ಧಿಗಾಗಿ ಸರ್ಕಾರ ಕೈಗೊಂಡಿರುವ ಕ್ರಮವೇನು; ರಸ್ತೆ ಅಭಿವೃದ್ಧಿಗಾಗಿ ಅಂದಾಜುಪಟ್ಟಿ ಸಿದ್ಧಮಾಡಲಾಗಿದೆಯೇ; ಆಡಳಿತಾತ್ಮಕ ಅನುಮೋದನೆ ಮಾಡಲಾಗಿದೆಯೇ ಮತ್ತು ಬಿಡುಗಡೆ ಮಾಡಿರುವ ಅನುದಾನ ಎಷ್ಟು (ಪೂರ್ಣ ವಿವರಗಳನ್ನು ಒದಗಿಸುವುದು)?